ಹಾಪ್‌ಕಾಮ್ಸ್ ಮಳಿಗೆ.

4185(4339) ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) :— ಮಾನ್ಯ ತೋಟಗಾರಿಕೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

1. ರಾಜ್ಯದ ವಿವಿಧ ಹಾಪ್ ಕಾಮ್ಸ್ ಮಳಿಗೆಗಳಲ್ಲಿ ಮಾರಾಟವಾಗುವ ವಸ್ತುಗಳಿಗೆ ನಿಗಧಿಪಡಿಸಿರುವ ಬೆಲೆಗಿಂತ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿರುವ್ಯದು ಸರ್ಕಾರದ ಗಮನಕ್ಕೆ ಬಂದಿದೆಯೇ;

2. ಹಾಗಿದ್ದಲ್ಲಿ ಸರ್ಕಾರ ಯಾವುದಾದರೂ ಮಳಿಗೆಯನ್ನು ಮುಚ್ಚಲು ಆದೇಶ ನೀಡಿದೆಯೇ;

3. ಸದರಿ ವಿಷಯದ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಅಲ್ಲಂ ವೀರಭದ್ರಪ್ಪ (ತೋಟಗಾರಿಕೆ ರಾಜ್ಯ ಸಚಿವರು) :—

1. ಬಂದಿದೆ.

2. ಇಲ್ಲ.

3. ಹೆಚ್ಚಿನ ಬೆಲೆಗೆ ಮಾರಾಟ ಮಾಡಿದ ಪ್ರಕರಣಗಳಲ್ಲಿ ಮಾರಾಟಗಾರರ ಮೇಲೆ ಶಿಸ್ತಿನ ಕ್ರಮ ತೆಗೆದುಕೊಂಡು ಮಳಿಗೆಯಿಂದ ಬದಲಾಯಿಸಿ ವಿಚಾರಣೆಗೆ ಗುರಿಪಡಿಸಲಾಗಿದೆ ಹಾಗೂ ದಂಡ ವಿಧಿಸಲಾಗಿದೆ. ತಪಾಸಣೆ ವ್ಯವಸ್ಥೆಯನ್ನು ಬಿಗಿಗೊಳಿಸಲಾಗಿದೆ. ಸಾರ್ವಜನಿಕರ ಅನುಕೂಲಕ್ಕಾಗಿ ಮಳಿಗೆಗಳ ಮುಂದೆ ಪ್ರತಿ ದಿನ ದರಪಟ್ಟಿಯನ್ನು ಪ್ರಕಟಣೆ ಮಾಡಲಾಗುತ್ತದೆ.

ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆ.

4186(4338) ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮಾಂತರ) :— ಮಾನ್ಯ ಕಾರ್ಮಿಕ ಮತ್ತು ವಕ್ಫ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ. ಬಾಲ ಕಾರ್ಮಿಕ ಪದ್ಧತಿಯನ್ನು ಸಂಪೂರ್ಣವಾಗಿ ನಿರ್ಮೂಲನ ಮಾಡಲು ಸರ್ಕಾರದ ಕೈಗೊಂಡಿರುವ ಕ್ರಮಗಳೇನು?

ಆ. ಬಾಲಕಾರ್ಮಿಕರನ್ನು ನೇಮಕ ಮಾಡಿಕೊಂಡು ದುಡಿಸಿಕೊಳ್ಳುವ ಮಾಲೀಕರಿಗೆ ಕಾನೂನಿನ ಚೌಕಟ್ಟಿನಲ್ಲಿ ನೀಡಬಹುದಾದ ಶಿಕ್ಷೆ ಯಾವುದು ಕಳೆದ ಒಂದು ವರ್ಷದ ಅವಧಿಯಲ್ಲಿ ಇಂತಹ ಎಷ್ಟು ಪ್ರಕರಣಗಳು ಪತ್ತೆಯಾಗಿದೆ ಮತ್ತು ಎಷ್ಟು ಜನರಿಗೆ ಶಿಕ್ಷೆಯಾಗಿದೆ.

ಇ. ರಾಜ್ಯದಲ್ಲಿ ಇರುವ ಕೂಲಿ ಕಾರ್ಮಿಕರ ಶಾಲೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡಿ)